## ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಬಗ್ಗೆ

3160 - ಶ್ರೀ ರಾಜೇಂದ್ರ ವರ್ಮ (ಹುಲಸೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಹೆದ್ದಾರಿಗಳು ಮತ್ತು ಸೇತುವೆಗಳ ನಿರ್ಮಾಣ ಮತ್ತು ಅಭಿವೃದ್ಧಿ ಕಾರ್ಯಕೈಗೊಳ್ಳುವ ಸಲುವಾಗಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮವನ್ನು ಸ್ಥಾಪನೆ ಮಾಡಿರುವುದು ನಿಜವಲ್ಲವೆ?

ಆ) ಹುಲಸೂರು ವಿಧಾನಸಭಾ ಕ್ಷೇತ್ರವು ಬಹಳ ಹಿಂದುಳಿದ ಪ್ರದೇಶವಾಗಿದ್ದು ಈ ಕ್ಷೇತ್ರವು ಪಕ್ಕದ ಮಹಾರಾಷ್ಟ್ರ ರಾಜ್ಯದ ಗಡಿಭಾಗದಲ್ಲಿದ್ದು ಈ ಕ್ಷೇತ್ರದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಮತಿಯಿಂದ ರಾಜ್ಯ ಹೆದ್ದಾರಿಯ ನಿರ್ಮಾಣ ಹಾಗೂ ಸೇತುವೆಗಳ ನಿರ್ಮಾಣವನ್ನು ತೆಗೆದುಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ಇದ್ದಲ್ಲಿ, ಇದಕ್ಕಾಗಿ ಎಷ್ಟು ಹಣವನ್ನು ಖರ್ಚುಮಾಡಲಾಗುವುದು. ಈ ಕ್ಷೇತ್ರದ ಯಾವ ಮಾರ್ಗವನ್ನು ರಾಜ್ಯ ಹೆದ್ದಾರಿಯನ್ನಾಗಿ ಅಭಿವೃದ್ಧಿಗೊಳಿಸಲಾಗುವುದು?

ಇ) ಪ್ರಸ್ತಾವನೆ ಇಲ್ಲದಿದ್ದಲ್ಲಿ ಕಾರಣವೇನು?

ಶ್ರೀ ಧರ್ಮ್‌ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ನಿಜ.

ಆ) ಹುಲಸೂರು ಮತಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಕಾಮಗಾರಿಯ ಪ್ರಸ್ತಾವನೆ ಇರುವುದಿಲ್ಲ.

ಇ) ಸರ್ವೆ ಮತ್ತು ಸಮೀಕ್ಷೆ ನಡೆಸಿರುವಂತೆ ಅತಿ ಮುಖ್ಯವಾದಂತಹ ರಸ್ತೆ ಮತ್ತು ಸೇತುವೆಗಳ ಕಾಮಗಾರಿಗಳನ್ನು ಮಾತ್ರ ಕೈಗೆತ್ತಿಕೊಳ್ಳಲಾಗುತ್ತಿದೆ.

## ರಾಜ್ಯದಲ್ಲಿರುವ ಕ್ರೀಡಾ ಶಾಲೆಗಳ ಕುರಿತು

3161 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಕ್ರೀಡಾ ಶಾಲೆಗಳ ಸಂಖ್ಯೆ ಎಷ್ಟು?

ಆ) ಇವುಗಳು ಎಲ್ಲೆಲ್ಲಿವೆ?

ಇ) ಈ ಶಾಲೆಗಳಲ್ಲಿರುವ ಪ್ರವೇಶ ಮಿತಿ ಎಷ್ಟು?

ಈ) ಈ ಶಾಲೆಗಳಲ್ಲಿ ಯಾವ ಯಾವ ಕ್ರೀಡೆಗಳ ಬಗ್ಗೆ ತರಬೇತಿ ನೀಡಲಾಗುತ್ತಿದೆ?

ಉ) 2000-2001ನೇ ಸಾಲಿನಲ್ಲಿ ಈ ಶಾಲೆಗಳಿಗಾಗಿ ಮೀಸಲಾಗಿಟ್ಟಿರುವ ಅನುದಾನವೆಷ್ಟು?